ಶ್ರೀ ಜೆ. ಹೆಚ್. ಪಟೇಲ್.—ಯಾವುದೇ ಒಂದು ಸಂಸ್ಥೆಯ ದಕ್ಷತೆಯನ್ನು ಹೆಚ್ಚಿಸುವ ಬಗ್ಗೆ ಎಲ್ಲ ಕ್ರಮಗಳನ್ನು ಸರ್ಕಾರ ಕೈಗೊಳ್ಳುತ್ತದೆ. ಆದರೆ ಮಾನ್ಯ ಸದಸ್ಯರಿಗೆ ಇಷ್ಟೇ ಹೇಳುತ್ತೇನೆ. ಈಗ ವಿದ್ಯುಚ್ಛಕ್ತಿ ಮಂಡಳಿಯ ಕೆಲವು ಕೆಲಸಗಳಲ್ಲಿ ದೋಷ ಇರಬಹುದು. ಇಲ್ಲವೆಂದು ನಾನು ಹೇಳುವುದಿಲ್ಲ. ಅಲ್ಲಿ ಎಲ್ಲ ಸರಿಯಾಗಿದೆ ಎಂದು ನಾನು ಹೇಳುವುದಿಲ್ಲ. ಆದರೆ ಅವರು ಮಾಡಿರುವಂತಹ ಕೆಲಸದ ಬಗ್ಗೆ ನೋಡಿದರೆ ಬಹಳ ಚೆನ್ನಾಗಿ ಕೆಲಸ ಮಾಡಿದ್ದಾರೆ. ಇನ್ನೂ ಹೆಚ್ಚು ಕೆಲಸ ಮಾಡಬೇಕಾಗಿದೆ. ಮಾನ್ಯ ಸದಸ್ಯರು ಹೇಳಿದ ಹಾಗೆ ಅಕೌಂಟೆಂಟ್ ಇರಂಥ ಕಡೆ ಇಂಜಿನಿಯರ್ ಇದ್ದರೆ, ಇಂಜಿನಿಯರ್ ಅವರು ಇರುವ ಕಡೆ ಅಕೌಂಟೆಂಟ್ ಇದ್ದರೆ ಅದನ್ನು ಸರಿಪಡಿಸುವುದು ಸೂಕ್ತವಾಗಿದೆ. ಇದನ್ನೆಲ್ಲಾ ಸರಿಪಡಿಸಲು ಅಲ್ಲಿಗೆ ನಾವು ಹೊಸ ಅಧ್ಯಕ್ಷರನ್ನು ನೇಮಕ ಮಾಡುತ್ತೇವೆ. ಆದರೆ ಯಾರೂ ಎಂದು ಈಗ ಹೆಸರು ಹೇಳುವುದು ಸರಿಯಲ್ಲ.

ಶಿಕಾರಿಪುರ ತಾಲ್ಲೂಕ್ ಗಾಂಧಿನಗರದ ವಿದ್ಯುದ್ದೀಕರಣದ ಬಗ್ಗೆ

೩೦೬೮. ಶ್ರೀ ಬಿ. ಎಸ್. ಯಡಿಯೂರಪ್ಪ (ಶಿಕಾರಿಪುರ).—ಮಾನ್ಯ ಭಾರಿ ಮತ್ತು ಮಧ್ಯಮ ಪ್ರಮಾಣದ ಉದ್ಯಮಗಳು ಮತ್ತು ವಿದ್ಯುತ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶಿಕಾರಿಪುರ ತಾಲ್ಲೂಕು ಗಾಂಧಿನಗರಕ್ಕೆ ವಿದ್ಯುದ್ದೀಕರಣ ಮಾಡಲಾಗಿದೆಯೇ

ಆ) ಹಾಗಿಲ್ಲದಿದ್ದರೆ ಅದಕ್ಕೆ ಕಾರಣವೇನು?

ಶ್ರೀ ಜೆ. ಹೆಚ್. ಪಟೇಲ್ (ಕೈಗಾರಿಕಾ ಮತ್ತು ವಿದ್ಯುತ್ ಮಂತ್ರಿಗಳು).—

ಅ) ಗಾಂಧಿನಗರದ ವಿದ್ಯುದ್ದೀಕರಣ ಕಾರ್ಯ ಮುಗಿದಿದೆ. ವಿದ್ಯುತ್ ಪರಿವೀಕ್ಷಕರಿಂದ ಪರೀಕ್ಷಿಸಬೇಕಾಗಿದೆ. ಅವರಿಗೆ ಪತ್ರ ಬರೆಯಲಾಗಿದೆ. ಅವರ ಅನುಮತಿ ಪಡೆದ ಕೂಡಲೇ ಗಾಂಧಿನಗರಕ್ಕೆ ವಿದ್ಯುತ್ ಸರಬರಾಜು ಮಾಡಲಾಗುವುದು.

ಆ) 'ಅ' ಉತ್ತರದಿಂದ ಉದ್ಭವಿಸುವುದಿಲ್ಲ.

ಅಧ್ಯಕ್ಷರು.—ಇಲ್ಲಿಗೆ ಪ್ರಶ್ನೋತ್ತರ ಅವಧಿ ಮುಗಿಯಿತು. ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಶಿಷ್ಟನೇ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

ಶ್ರೀ ಆರ್. ವಿ. ದೇಶಪಾಂಡೆ.—ಮಾನ್ಯ ಅಧ್ಯಕ್ಷರೇ, ಲಿಖಿತ ಮೂಲಕ ಉತ್ತರಿಸುವ ಶಿಷ್ಟನೇ ಪಟ್ಟಿಯ ಪ್ರಶ್ನೆಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸಲಾಯಿತು.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಮಂಗಳೂರು ಅನಿಲ ಟರ್ಬೈನ್ ವಿದ್ಯುತ್ ಘಟಕ

೪೦೭೯. ಶ್ರೀ ಬಿ. ಎ. ಉಮರಬ್ಬ (ವಿಟ್ಲ).—ಮಾನ್ಯ ಭಾರಿ ಮತ್ತು ಮಧ್ಯಮ ಪ್ರಮಾಣದ ಉದ್ಯಮಗಳು ಮತ್ತು ವಿದ್ಯುತ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯ ಸರ್ಕಾರದ ಮುಂದೆ ಒಟ್ಟು ಎಷ್ಟು ವಿದ್ಯುತ್ ಯೋಜನೆಗಳಿವೆ? ಅವು ಯಾವುವು ಹಾಗೂ ಯಾವ ಸ್ಥಳಗಳಲ್ಲಿ ಪ್ರಾರಂಭಿಸಲಾಗುವುದು, ಅವುಗಳ ಯೋಜನಾ ವಿವರ ಹಾಗೂ ಅಂದಾಜಿಸಲಾದ ವೆಚ್ಚವೆಷ್ಟು?

ಆ) ಅವುಗಳನ್ನು ಯಾವಾಗ ಪ್ರಾರಂಭಿಸಲಾಗುತ್ತದೆ?